## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 665(728)

ಮಾನ್ಯ ಸದಸ್ಯರ ಹೆಸರು: ಶ್ರೀ ಐವನ್ ಡಿ ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು: ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಉತ್ತರಿಸಬೇಕಾದ ದಿನಾಂಕ: 16.12.2024.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಎಷ್ಟು ಶಾಲೆಗಳಲ್ಲಿ ಏಕ ಉಪಾಧ್ಯಾಯರಿದ್ದಾರೆ ಎಷ್ಟು ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ 10 ಕ್ಕಿಂತಲೂ ಕಡಿಮೆ ಇದೆ: ಇದಕ್ಕೆ ಕಾರಣಗಳೇನು; ಈ ಬಗ್ಗೆ ಇಲಾಖೆ ತೆಗೆದುಕೊಂಡ ಕ್ರಮವೇನು: (ವಿವರ ನೀಡುವುದು). | ರಾಜ್ಯದಲ್ಲಿ ಒಟ್ಟು 5399 ಸರ್ಕಾರಿ ಪ್ರಾಥಮಿಕ ಶಾಲೆಗಳು ಏಕೋಪಾಧ್ಯಾಯ ಶಾಲೆಗಳಾಗಿರುತ್ತವೆ.<br><br>ರಾಜ್ಯದಲ್ಲಿ 10 ಕ್ಕಿಂತ ಕಡಿಮೆ ದಾಖಲಾತಿ ಇರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಒಟ್ಟು ಸಂಖ್ಯೆ: 4264.<br><br>ಮಕ್ಕಳ ಸಂಖ್ಯೆ ಕಡಿಮೆಯಾಗಲು ಪ್ರಮುಖವಾಗಿ ವ್ಯಾಪ್ತಿಯ ಭೌಗೋಳಿಕ ಅಂಶ ಹಾಗೂ ಸರ್ಕಾರಿ ಶಾಲೆಗಳ ಸುತ್ತಮುತ್ತ ಇರುವ ಖಾಸಗಿ ಶಾಲೆಗಳು ಮಕ್ಕಳನ್ನು ಮತ್ತು ಪೋಷಕರನ್ನು ಆಕರ್ಷಿಸುತ್ತಿರುವುದು ಕಾರಣವಾಗಿದೆ.<br><br>ಈ ನಿಟ್ಟಿನಲ್ಲಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಅನುವಾಗುವಂತೆ, ಸರ್ಕಾರಿ ಶಾಲೆಗಳ ದಾಖಲಾತಿ ಹೆಚ್ಚಿಸಲು ಪ್ರೋತ್ಸಾಹದಾಯಕ ಉಪಕ್ರಮಗಳಾದ ಉಚಿತ ಪಠ್ಯಪುಸ್ತಕ, ಎರಡು ಜೊತೆ ಸಮವಸ್ತ್ರ, ಕ್ಷೀರ ಭಾಗ್ಯ, ಮಧ್ಯಾಹ್ನ ಉಪಹಾರ ಯೋಜನೆ, ಶೂ, ಸಾಕ್ಸ್ ಇತ್ಯಾದಿಗಳನ್ನು ವಿತರಿಸಲಾಗುತ್ತಿದೆ. ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣವನ್ನು ನೀಡುವ ಮೂಲಕ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ.<br><br>ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿನ ಶಿಕ್ಷಕರ ಕೊರತೆಯನ್ನು ನೀಗಿಸಲು ಅತಿಥಿ ಶಿಕ್ಷಕರುಗಳನ್ನು ನೇಮಕ ಮಾಡಿಕೊಳ್ಳಲಾಗಿರುತ್ತದೆ ಹಾಗೂ ಖಾಲಿ ಹುದ್ದೆಗಳಿಗೆ ಹಂತ ಹಂತವಾಗಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ) | ಈ ಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಇದನ್ನು ಯಾವ ರೀತಿ ಪರಿಗಣಿಸಲಾಗುತ್ತದೆ ಮತ್ತು ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದಂತಾಗುವುದಿಲ್ಲವೆ: (ವಿವರ ನೀಡುವುದು). | ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ದಾಖಲಾತಿಯನ್ನು ಹೆಚ್ಚಿಸಲು ಸರ್ಕಾರವು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಂಡಿರುತ್ತದೆ.<br><br>ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಅಭಿವೃದ್ಧಿಗೊಳಿಸುವ ಸಂಬಂಧ "ಪ್ರತಿ ಮಗುವು ಶಾಲೆಯಲ್ಲಿ ಮತ್ತು ಉತ್ತಮ ಕಲಿಕೆಯೊಂದಿಗೆ"ಎಂಬ ನೀತಿ ಗುರಿಯನ್ನು ಆಧರಿಸಿ ಕೆಳಕಂಡ ಐದು |

| | | |
|---|---|---|
| | | ಗುಣಾತ್ಮಕ ಕಾರ್ಯಕ್ರಮಗಳನ್ನು ಯೋಜಿಸಿದೆ.<br>❖ ಶಿಕ್ಷಣ ಗುಣಮಟ್ಟ ಸುಧಾರಣಾ ಕಾರ್ಯಕ್ರಮ.<br>❖ ಗುಣಮಟ್ಟ ಖಾತ್ರಿಯ ಉಪಕ್ರಮಗಳು.<br>❖ ತಂತ್ರಜ್ಞಾನ ಆಧಾರಿತ ಕಲಿಕೆ.<br>❖ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಕಗಳು.<br>❖ ವಿದ್ಯಾರ್ಥಿಗಳನ್ನು ಪ್ರೇರೇಪಿಸುವ ಕಾರ್ಯಕ್ರಮಗಳು.<br><br>ಮೇಲಿನ ಐದು ಕಾರ್ಯಕ್ರಮಗಳ ಅಡಿಯಲ್ಲಿ ಈ ಕೆಳಕಂಡ ಶೈಕ್ಷಣಿಕ ಗುಣಮಟ್ಟ ಬಲವರ್ಧನೆ ಕಾರ್ಯಕ್ರಮಗಳನ್ನು ಯೋಜಿಸಿ ಅನುಷ್ಠಾನಗೊಳಿಸಲಾಗುತ್ತಿದೆ.<br>❖ 1 ರಿಂದ 3ನೇ ತರಗತಿಗಳಲ್ಲಿ ಶಿಶುಕೇಂದ್ರಿತ, ಸಂತೋಷದಾಯಕ ನಲಿ-ಕಲಿ ಪದ್ಧತಿಯನ್ನು ಅಳವಡಿಸಲಾಗಿದೆ. ನಲಿ-ಕಲಿ ಬಲವರ್ಧನೆಗಾಗಿ ಹಲವಾರು ಚಟುವಟಿಕೆಗಳಾದ ಪಠ್ಯಕ್ರಮ ಪರಿಷ್ಕರಣೆ, ಶಿಕ್ಷಕರ ತರಬೇತಿ ಕಾರ್ಯಕ್ರಮ ಅನುಷ್ಠಾನ ಮೌಲ್ಯಮಾಪನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ.<br>❖ 1 ರಿಂದ 3ನೇ ತರಗತಿಗಳ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವರ್ಷದ ಪ್ರಾರಂಭದ 03 ತಿಂಗಳ ಅವಧಿಯ 'ವಿದ್ಯಾಪ್ರವೇಶ' ಎಂಬ ನೂತನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.<br>❖ ಗಣಿತ ಕಲಿಕಾ ಬಲವರ್ಧನೆಗಾಗಿ 4 ಮತ್ತು 5ನೇ ತರಗತಿಗಳಿಗೆ 'ಗಣಿತ ಕಲಿಕಾ ಆಂದೋಲನಾ ಕಾರ್ಯಕ್ರಮ' ಅನುಷ್ಠಾನಗೊಳಿಸಿದ್ದು, ಶಾಲೆಗಳಿಗೆ ಗಣಿತ ಕಿಟ್‌ಗಳನ್ನು ವಿತರಿಸಿದೆ.<br>❖ ಶಿಕ್ಷಣ ಪ್ರತಿಷ್ಠಾನದ ಸಹಭಾಗಿತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಸಮಾನ ವಯಸ್ಕರ ಸಮೂಹದಿಂದ ಕಲಿಕೆ ಹಾಗೂ ವಿವಿಧ ರೀತಿಯ ಪ್ರೇರಿತ ಚಟುವಟಿಕೆ ಕಾರ್ಯಕ್ರಮಗಳ ಮೂಲಕ ಕಲಿಕೆಯನ್ನು ಉತ್ತಮಗೊಳಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ.<br>❖ ವಿದ್ಯಾರ್ಥಿಗಳಲ್ಲಿ ಓದು, ಬರಹ ಹಾಗೂ ಗಣಿತದ ಮೂಲಭೂತ ಕೌಶಲಗಳ (FLN) ಅಭಿವೃದ್ಧಿಗಾಗಿ ತರಗತಿಗಳಲ್ಲಿ ಅಗತ್ಯ ಚಟುವಟಿಕೆಗಳು, ಫ್ಲಾನೆಲ್ ಬೋರ್ಡ್, ವಾಚನಾ ಮೂಲೆಗಳ ಸ್ಥಾಪನೆ, ಅಕ್ಷರ |

| | | |
|---|---|---|
| | | ಚಪ್ಪರ ಇತ್ಯಾದಿ ಚಟುವಟಿಕೆಗಳನ್ನು ಹಮ್ಮಿಕೊಂಡಿದೆ.<br>❖ ಪ್ರಾದೇಶಿಕ ಆಂಗ್ಲ ಭಾಷಾ ತರಬೇತಿ ಸಂಸ್ಥೆ (ಆರ್.ಐ.ಇ) ಬೆಂಗಳೂರು ವತಿಯಿಂದ ಶಿಕ್ಷಕರಿಗೆ ಆಂಗ್ಲ ಭಾಷೆ ಬೋಧನಾ ತರಬೇತಿ ನೀಡಲಾಗಿದೆ.<br>❖ ರಾಜ್ಯದಲ್ಲಿ 74 ಆದರ್ಶ ವಿದ್ಯಾಲಯಗಳ ಸ್ಥಾಪನೆ ಮೂಲಕ ಗ್ರಾಮೀಣ ಮಕ್ಕಳಿಗೆ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ಪಡೆಯುವ ಅವಕಾಶ ಕಲ್ಪಿಸಲಾಗಿದೆ.<br>❖ ಸರ್ಕಾರಿ ಶಾಲೆಗಳಲ್ಲಿ ಆಂಗ್ಲ ಭಾಷಾ ಬೋಧನೆಯನ್ನು ಬಲವರ್ಧನೆಗೊಳಿಸಲು ಶಿಕ್ಷಕರ ಸಾಮರ್ಥ್ಯ ಅಭಿವೃದ್ಧಿಗೆ ಬ್ರಿಟಿಷ್ ಕೌನ್ಸಿಲ್ ಸಂಸ್ಥೆಯೊಂದಿಗೆ ಎಂ.ಒ.ಯು. ಮಾಡಿಕೊಳ್ಳಲಾಗಿದೆ.<br>❖ 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅಧಿಸೂಚಿಸಲಾಗಿದ್ದು, ಈ ಪೈಕಿ 13352 ಜನ ಶಿಕ್ಷಕರು ಆಯ್ಕೆ ಯಾಗಿರುತ್ತಾರೆ. ಇದರಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣ ಹೊರತುಪಡಿಸಿ 12269 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿಗೊಳಿಸಲಾಗಿದೆ.<br>❖ ಪ್ರಸ್ತುತ ಸಾಲಿನಲ್ಲಿ 35000 ಅತಿಥಿ ಶಿಕ್ಷಕರನ್ನು ಪ್ರಾಥಮಿಕ ಶಾಲೆಗಳಿಗೆ ನೇಮಸಿಕೊಳ್ಳಲಾಗಿರುತ್ತದೆ ಹಾಗೂ ಪ್ರೌಢಶಾಲಾ ಶಿಕ್ಷಕರ ಖಾಲಿ ಹುದ್ದೆಗಳಿಗೆ ಎದುರಾಗಿ ಕಲ್ಯಾಣ ಕರ್ನಾಟಕ ಪ್ರದೇಶದ ಪ್ರೌಢಶಾಲೆಗಳು ಸೇರಿದಂತೆ ಒಟ್ಟು 8968 ಅತಿಥಿ ಶಿಕ್ಷಕರನ್ನು ಪ್ರೌಢ ಶಾಲೆಗಳಿಗೆ ನೇಮಕಾತಿ ಮಾಡಿ ವಿದ್ಯಾರ್ಥಿಗಳಿಗೆ ಗುಣಮಟ್ಟ ಶಿಕ್ಷಣ ನೀಡಲಾಗುತ್ತಿದೆ.<br>❖ ಕಲಿಕಾ ಸಾಧನೆಗಳ ನಿರ್ವಹಣೆಗಾಗಿ ಮಾಹಿತಿ ತಂತ್ರಾಂಶ ಆಧಾರಿತ ವಿದ್ಯಾರ್ಥಿಗಳ ಸಾಧನೆಯನ್ನು ಜಾಡು ಹಿಡಿಯುವ (SATS) ವ್ಯವಸ್ಥೆ ಮೂಲಕ 1 ರಿಂದ 12ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳ ಮಾಹಿತಿಯನ್ನು ತಂತ್ರಾಂಶದಲ್ಲಿ ಸಂಗ್ರಹಿಸಲಾಗಿದೆ ಹಾಗೂ 86 ಲಕ್ಷ ವಿದ್ಯಾರ್ಥಿಗಳ ಆಧಾರ್ ನೋಂದಣಿ ಪೂರ್ಣಗೊಂಡಿರುತ್ತದೆ.<br>❖ 1 ರಿಂದ 8ನೇ ತರಗತಿಗೆ ಅನುಗುಣವಾಗಿ ಕಲಿಕಾ ಫಲಿತಗಳನ್ನು ಸಿದ್ಧಪಡಿಸಿದ್ದು, ವಿದ್ಯಾರ್ಥಿಗಳಿಗೆ, ಪೋಷಕರಿಗೆ ಹಾಗೂ |

| | | |
|---|---|---|
| | | ಶಾಲೆಗಳಿಗೆ ಈ ಮಾಹಿತಿಯನ್ನು ತಲುಪಿಸಲಾಗಿದೆ.<br>❖ ಶಾಲಾ ವಿದ್ಯಾರ್ಥಿಗಳ ಮೌಲ್ಯವರ್ಧನೆಗಾಗಿ ಬಾನುಲಿ ಕಾರ್ಯಕ್ರಮ ಸರಣಿಯ ಮೂಲಕ ನೈತಿಕ ಶಿಕ್ಷಣ(ನೀತಿ ಕಥೆ ಪಾಠ) ನೀಡಲಾಗುತ್ತಿದೆ.<br>❖ ರಾಜ್ಯದಲ್ಲಿ 4193 ದ್ವಿಭಾಷಾ ಮಾಧ್ಯಮ ಶಾಲೆಗಳಿಗೆ ಆಂಗ್ಲ ಕಲಿಕೆಯನ್ನು ಉತ್ತೇಜಿಸಲು ಕಲಿಕಾ ಸಾಮಗ್ರಿಗಳ ಕಿಟ್ ಗಳನ್ನು ನೀಡಲಾಗಿದೆ. |
| ಇ) | ರಾಜ್ಯದಲ್ಲಿ ಎಷ್ಟು ಶಾಲೆಗಳಲ್ಲಿ ಕೊಠಡಿಗಳ ಕೊರತೆ ಇದೆ: ಇದರ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮವೇನು? (ವಿವರ ನೀಡುವುದು). | ರಾಜ್ಯದ ಶಾಲೆಗಳಲ್ಲಿ ಪ್ರಸ್ತುತ ಒಟ್ಟು 13925 ಕೊಠಡಿಗಳ ಕೊರತೆ ಇದೆ.<br>2024-25ನೇ ಸಾಲಿನಲ್ಲಿ ಒಟ್ಟು 784 ಕೊಠಡಿಗಳ ನಿರ್ಮಾಣಕ್ಕೆ ರೂ 11546.41 ಲಕ್ಷಗಳನ್ನು ಬಿಡುಗಡೆ ಮಾಡಿದೆ. ಉಳಿದಂತೆ ಅನುದಾನದ ಲಭ್ಯತೆಗನುಗುಣವಾಗಿ ಹಂತ ಹಂತವಾಗಿ ಕೊಠಡಿ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಇಪಿ 103 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು